ಅ) ಈಡೇರಿಕೆಗೆ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

ಇ) ಈ ಪದ್ಧತಿಯನ್ನು ಹೆಚ್ಚು ಅರ್ಥಪೂರ್ಣವಾಗಿ ಜಾರಿಗೆ ತರಲು ರಾಜ್ಯದಲ್ಲಿ ಸಾಕ್ಷರೋತ್ತರ, ಮುಂದುವರಿಕೆ ಶಿಕ್ಷಣ ಮತ್ತು ವೃತ್ತಿ ತರಬೇತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ.

ಈ) ಪ್ರಸ್ತುತ ಕರ್ನಾಟಕ ರಾಜ್ಯಾದ್ಯಂತ 16 ವಿದ್ಯಾಪೀಠಗಳು ಕರ್ನಾಟಕ ರಾಜ್ಯ ವಯಸ್ಕರ ಶಿಕ್ಷಣ ಸಮಿತಿ ಆಶ್ರಯದಲ್ಲಿ ಕಾರ್ಯನಿರ್ವಹಿಸುತ್ತಿವೆ.

ಉ) ಹೌದು.

ಊ) 1995-96ನೇ ಸಾಲಿನಿಂದ ಉತ್ತಮ ಫಲ ಪಡೆಯಲು ಸರ್ಕಾರವು ಯೋಜನಾ ಬಾಬ್ತಿನಡಿಯಲ್ಲಿ ಅನುದಾನವನ್ನು ಬಿಡುಗಡೆ ಮಾಡುತ್ತಿದೆ.

ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳಲ್ಲಿ ಹೆಚ್ಚುವರಿ ಬೋಧನಾ ಕೊಠಡಿಗಳ ನಿರ್ಮಾಣ

2550(2994) ಹೊನ್ನಳ್ಳಿ ಜಬ್ಬಾರ್ ಖಾನ್ ಹೈಯತ್ ಖಾನ್ (ಹುಬ್ಬಳ್ಳಿ) :— ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ. ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳಲ್ಲಿ ಬೋಧನಾ ಕೊಠಡಿಯ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ

ಆ. ಹಾಗಿದ್ದಲ್ಲಿ, ಹೆಚ್ಚುವರಿ ಬೋಧನಾ ಕೊಠಡಿಗಳನ್ನು ನಿರ್ಮಾಣ ಮಾಡಲು ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು;

ಇ. 1999-2000, 2000-2001ನೇ ಸಾಲಿನಲ್ಲಿ ಎಷ್ಟು ಹೆಚ್ಚುವರಿ ಕೊಠಡಿಗಳನ್ನು ನಿರ್ಮಿಸಲಾಗಿದೆ?

ಶ್ರೀ ಹೆಚ್. ವಿಶ್ವನಾಥ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :—

ಅ. ಬಂದಿದೆ.

ಆ. ರಾಜ್ಯದ ಮುಂದುವರೆದ ಯೋಜನಾ ಕಾರ್ಯಕ್ರಮಗಳಡಿಯಲ್ಲಿ 1993-94 ರಿಂದ ಪ್ರತಿ ವರ್ಷವೂ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಿಗೆ ಹೆಚ್ಚುವರಿ ಕೊಠಡಿಗಳನ್ನು ನಿರ್ಮಿಸಲಾಗುತ್ತಿದೆ.

ಇ. 1999-2000, 2000-2001ನೇ ಸಾಲಿನಲ್ಲಿ ನಿರ್ಮಿಸಲಾದ ಹೆಚ್ಚುರಿ ಕೊಠಡಿಗಳ ಸಂಖ್ಯೆ:

	1999-2000	2000-2001
ಪ್ರಾಥಮಿಕ ಶಿಕ್ಷಣ	4720	6705
ಪ್ರೌಢ ಶಿಕ್ಷಣ	130	21

ರಾಜ್ಯದಲ್ಲಿ ಸ್ವಚ್ಛಗ್ರಾಮ ಯೋಜನೆಯ ಅನುಷ್ಠಾನ

2551 (3001) ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ) :— ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ರಾಜ್ಯ ಸರ್ಕಾರವು ಹಳ್ಳಿಗಳ ಸಂಪೂರ್ಣ ನೈರ್ಮಲ್ಯಕ್ಕೆ ಒತ್ತು ನೀಡಲು ಯಾವ ಯಾವ ಯೋಜನೆಗಳನ್ನು ಹಮ್ಮಿಕೊಂಡಿದೆ.

ಆ) ಈ ಯೋಜನೆಯಡಿ ಯಾವ ಯಾವ ಕಾಮಗಾರಿಗಳು ಬರುತ್ತವೆ

ಇ) ಈ ಯೋಜನೆಗಾಗಿ ಈವರೆಗೂ ಎಷ್ಟು ಹಣವನ್ನು ಬಿಡುಗಡೆ ಮಾಡಲಾಗಿದೆ (ಜಿಲ್ಲಾವಾರು ವಿವರ ನೀಡುವುದು)

ಈ) ಇಲ್ಲಿಯವರೆಗೂ ಖರ್ಚು ಮಾಡಿರುವ ಹಣದ ಜಿಲ್ಲಾವಾರು ವಿವರ ನೀಡುವುದು?

ಶ್ರೀ ಎಂ.ವೈ. ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು) :—

ಅ) ರಾಜ್ಯ ಸರ್ಕಾರವು ಗ್ರಾಮಗಳ ಸಂಪೂರ್ಣ ನೈರ್ಮಲೀಕರಣಕ್ಕಾಗಿ ಸ್ವಚ್ಛಗ್ರಾಮ ಯೋಜನೆಯನ್ನು ಹಮ್ಮಿಕೊಂಡಿದೆ.

ಆ) ಸ್ವಚ್ಛಗ್ರಾಮ ಯೋಜನೆಯಡಿ ಈ ಕೆಳಕಂಡ ೫ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲಾಗುತ್ತದೆ.

ಅ. ಗ್ರಾಮದ ಒಳರಸ್ತೆ ಮತ್ತು ಬೀದಿಗಳ ಮೇಲ್ಮೈಯನ್ನು ಉತ್ತಮಪಡಿಸುವುದು.

ಆ. ಹೊಳೆ ಮತ್ತು ಮಳೆ ನೀರಿನ ವಿಲೇವಾರಿಗಾಗಿ ಪ್ರತಿ ಬೀದಿಯಲ್ಲಿಯೂ ಚರಂಡಿಗಳ ನಿರ್ಮಾಣ